**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಮತ್ತು ಪೂರ್ವ ಕಿಂಕೋ ನೌಕರರ / ಅಧಿಕಾರಿಗಳ ವೇತನ ಪರಿಷ್ಕರಣೆಗೆ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಟಿಡಿ 12 ಟಿಸಿಬಿ 2023, ದಿನಾಂಕ:17.03.2023.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಇವರ ಪತ್ರ ಸಂಖ್ಯೆ: ಕರಾಸ/ ಕೇಕ/ ಕಾರ್ಮಿಕ/ 04/ 2026-27, ದಿನಾಂಕ:11.05.2026.
3. ಸರ್ಕಾರದ ಆದೇಶ ಸಂಖ್ಯೆ: ಟಿಡಿ 12 ಟಿಸಿಬಿ 2023, ದಿನಾಂಕ:18.02.2026.
4. ಸರ್ಕಾರದ ಆದೇಶ ಸಂಖ್ಯೆ: ಟಿಡಿ 12 ಟಿಸಿಬಿ 2023, ದಿನಾಂಕ:29.04.2026.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರದ ಆದೇಶದಲ್ಲಿ, ರಾಜ್ಯ ರಸ್ತೆ ಸಾರಿಗೆ ನಿಗಮಗಳ ಅಧಿನಿಯಮ, 1950ರ ಸೆಕ್ಷನ್ 34(1)ರನ್ವಯ ದಿನಾಂಕ:01.03.2023ರಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಪೂರ್ವ ಕಿಂಕೋ ಅಧಿಕಾರಿ/ ನೌಕರರು ದಿನಾಂಕ:31.12.2019ರಂದು ಪಡೆಯುತ್ತಿದ್ದ ಮೂಲ ವೇತನವನ್ನು ಪರಿಷ್ಕರಿಸಿ ಶೇ.15ರಷ್ಟು ಹೆಚ್ಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಇವರು ರಾಜ್ಯ ರಸ್ತೆ ಸಾರಿಗೆ ನಿಗಮಗಳ ಅಧಿನಿಯಮ, 1950ರ ಸೆಕ್ಷನ್ 34(1)ರನ್ವಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಪೂರ್ವ ಕಿಂಕೋ ನೌಕರರ /ಅಧಿಕಾರಿಗಳು ದಿನಾಂಕ:31.03.2025 ರಂದು ಪಡೆಯುತ್ತಿದ್ದ ಮೂಲವೇತನವನ್ನು ಪರಿಷ್ಕರಿಸಿ ನಿರ್ಧರಿಸಲು, ಅದರಂತೆ, ನಿರ್ಧರಿಸಿದ ಶೇಕಡವಾರು ಹೆಚ್ಚಳದೊಂದಿಗೆ ಉನ್ನತ ವೇತನ ಶ್ರೇಣಿ, ಮಧ್ಯಂತರ (ಸೆಲೆಕ್ಷನ್ ಗ್ರೇಡ್) ವೇತನ ಶ್ರೇಣಿಗಳು ಸೇರಿದಂತೆ ನಿಗಮದಲ್ಲಿ ಪ್ರಸ್ತುತ ಇರುವ ಎಲ್ಲಾ ವೇತನ ಶ್ರೇಣಿಗಳನ್ನು ಅದಕ್ಕನುಗುಣವಾಗಿ ಪರಿಷ್ಕರಿಸಲು, ಸದರಿ ಪರಿಷ್ಕರಣೆಯನ್ನು ದಿನಾಂಕ:01.04.2025 ರಿಂದ ಜಾರಿಗೊಳಿಸಲು ಹಾಗೂ ದಿನಾಂಕ:01.07.2026ರ ಮಾಹೆಯ ವೇತನದಲ್ಲಿ ಅನುಷ್ಠಾನಗೊಳಿಸಿ ಎಲ್ಲಾ ಅರ್ಹ ಅಧಿಕಾರಿ ಮತ್ತು ನೌಕರರಿಗೆ ಪಾವತಿಸಲು ಮತ್ತು ಸಾರಿಗೆ ನಿಗಮಗಳು ಕಳೆದ ಹಲವಾರು ವರ್ಷಗಳಿಂದ ನಷ್ಟವನ್ನು ಅನುಭವಿಸುತ್ತಿದ್ದು, ಪ್ರಸ್ತುತ ರೂ.7130.80 ಕೋಟಿ ಹೊಣೆಗಾರಿಕೆ ಪಾವತಿಸುವುದು ಬಾಕಿ ಉಳಿದಿರುವುದರಿಂದ ದಿನಾಂಕ:01.04.2025 ರಿಂದ ದಿನಾಂಕ:30.06.2026ರ ಅವಧಿಯ ಹಿಂಬಾಕಿಯನ್ನು ಮುಂದಿನ ದಿನಗಳಲ್ಲಿ ಸಂಸ್ಥೆಗಳ ಆರ್ಥಿಕ ಪರಿಸ್ಥಿತಿಗಳಿಗೆ ಅನುಗುಣವಾಗಿ ಹಂತ ಹಂತವಾಗಿ ಪಾವತಿಸಲು ಹಾಗೂ ಈ ವೇತನ ಪರಿಷ್ಕರಣೆಯು ದಿನಾಂಕ:01.04.2025 ರಿಂದ 31.03.2029ರವರೆಗೆ ಅಂದರೆ, ನಾಲ್ಕು ವರ್ಷದ ಅವಧಿಗೆ ಜಾರಿಯಲ್ಲಿರುತ್ತದೆ ಎಂದು ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳ ನೌಕರರು ಮತ್ತು ಅಧಿಕಾರಿಗಳಿಗೆ (ಪೂರ್ವ ಕಿಂಕೋ ನೌಕರರು ಸೇರಿದಂತೆ) ದಿನಾಂಕ:01.01.2021ರಿಂದ 28.02.2023ರವರೆಗೆ

Scanned with OKEN Scanner

ಒಟ್ಟು 26 ತಿಂಗಳ ಹಿಂಬಾಕಿ ಮೊತ್ತ ರೂ.1271.92 ಕೋಟಿಗಳನ್ನು ಪಾವತಿಸಲು ಅನುಮೋದನೆ ನೀಡಿ ಆದೇಶಿಸಲಾಗಿದ್ದು, ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ ಮೊದಲನೆಯ ಕಂತಿನ ಮೊತ್ತ ರೂ.450.00 ಕೋಟಿಗಳನ್ನು ನಿಗಮವಾರು ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಇವರ ಪ್ರಸ್ತಾವನೆಯನ್ನು ಹಾಗೂ ಸಾರಿಗೆ ನಿಗಮಗಳ ಪ್ರಸ್ತುತ ಆರ್ಥಿಕ ಪರಿಸ್ಥಿತಿ ಹಾಗೂ ಹೊಣೆಗಾರಿಕೆಗಳನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಟಿಡಿ 12 ಟಿಸಿಬಿ 2023, ಬೆಂಗಳೂರು,**
**ದಿನಾಂಕ:12.05.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಸ್ತೆ ಸಾರಿಗೆ ನಿಗಮಗಳ ಅಧಿನಿಯಮ, 1950ರ ಸೆಕ್ಷನ್ 34(1)ರನ್ವಯ ದಿನಾಂಕ:01.04.2025ರಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಪೂರ್ವ ಕಿಂಕೋ ಅಧಿಕಾರಿ/ ನೌಕರರ ವೇತನ ಪರಿಷ್ಕರಣೆಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

1. ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಪೂರ್ವ ಕಿಂಕೋ ಅಧಿಕಾರಿಗಳು/ ನೌಕರರು ದಿನಾಂಕ:31.03.2025 ರಂದು ಪಡೆಯುತ್ತಿದ್ದ ಮೂಲ ವೇತನವನ್ನು ಶೇ.12.50 ರಷ್ಟು ಹೆಚ್ಚಿಸಿ ಅದರಂತೆ ವೇತನ ಶ್ರೇಣಿಗಳನ್ನು ಪರಿಷ್ಕರಿಸಲು;
2. ಪೂರ್ವ ಕಿಂಕೋ ನೌಕರರು ಸೇರಿದಂತೆ ನಾಲ್ಕು ಸಾರಿಗೆ ಸಂಸ್ಥೆಗಳ ಅರ್ಹ ಅಧಿಕಾರಿ/ನೌಕರರ ಉನ್ನತ ವೇತನ ಶ್ರೇಣಿ, ಮಧ್ಯಂತರ (Selection Grade) ವೇತನ ಶ್ರೇಣಿಗಳು ಸೇರಿದಂತೆ ಪ್ರಸ್ತುತ ಇರುವ ಎಲ್ಲಾ ವೇತನ ಶ್ರೇಣಿಗಳನ್ನು ಶೇ.12.50ರಷ್ಟು ಹೆಚ್ಚಿಸಿ ಅದಕ್ಕನುಗುಣವಾಗಿ ಪರಿಷ್ಕರಿಸಲು;
3. ಸದರಿ ವೇತನ ಪರಿಷ್ಕರಣೆಯನ್ನು ದಿನಾಂಕ:01.07.2026ರ ಮಾಹೆಯ ವೇತನದಲ್ಲಿ ಅನುಷ್ಠಾನಗೊಳಿಸಿ ಎಲ್ಲಾ ಅರ್ಹ ಅಧಿಕಾರಿ ಮತ್ತು ನೌಕರರಿಗೆ ಪಾವತಿಸಲು;
4. ದಿನಾಂಕ:01.04.2025 ರಿಂದ ದಿನಾಂಕ:30.06.2026ರ ಅವಧಿಯ ವೇತನ ಪರಿಷ್ಕರಣೆಯ ಹಿಂಬಾಕಿಯನ್ನು ಮುಂದಿನ ದಿನಗಳಲ್ಲಿ ಸಂಸ್ಥೆಗಳ ಆರ್ಥಿಕ ಪರಿಸ್ಥಿತಿಗನುಗುಣವಾಗಿ ಹಂತ ಹಂತವಾಗಿ ಪಾವತಿಸಲು;

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Pushpa V.S.

**(ಪುಷ್ಪ ವಿ.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಾರಿಗೆ ಇಲಾಖೆ

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಆಡಿಟ್-2) ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ.

Scanned with OKEN Scanner

3. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ
7. ವ್ಯವಸ್ಥಾಪಕ ನಿರ್ದೇಶಕರು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಕಲಬುರಗಿ.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಸನ್ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ/ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
14. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಸಾರಿಗೆ ಇಲಾಖೆ.
15. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.

Scanned with OKEN Scanner